ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-1**

ಸಂಖ್ಯೆ:-ಎಡಿಎಂ2(1)ಶಿ.ರಾ.ಪ್ರ-01/2020-21. ದಿನಾಂಕ:07-07-2020.

**-:ಸುತ್ತೋಲೆ:-**

ವಿಷಯ:-2018 ನೇ ಸಾಲಿನ **"ರಾಷ್ಟ್ರ ಮಟ್ಟದ ಉತ್ತಮ ಶಿಕ್ಷಕ"** ಪ್ರಶಸ್ತಿಗೆ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಲು ನೀಡಲಾಗಿದ್ದ ಅವಧಿಯನ್ನು ವಿಸ್ತರಿಸಿರುವ ಕುರಿತು.

ಉಲ್ಲೇಖ:-ಮಾನವ ಸಂಪನ್ಮೂಲ ಅಭಿವೃದ್ಧಿ ಇಲಾಖೆ, ಭಾರತ ಸರ್ಕಾರ, ನವದೆಹಲಿ ಇವರಿಂದ ಇ-ಮೇಲ್ ಮೂಲಕ ಸ್ವೀಕೃತವಾಗಿರುವ ಪತ್ರದ ದಿನಾಂಕ: 06.07.2020 ರಂತೆ.

*********

ವಿಷಯಕ್ಕೆ ಸಂಬಂಧಿಸಿದಂತೆ, 2019 ನೇ ಸಾಲಿನ **"ರಾಷ್ಟ್ರ ಮಟ್ಟದ ಉತ್ತಮ ಶಿಕ್ಷಕ"** ಪ್ರಶಸ್ತಿಗೆ,

1. ರಾಜ್ಯ ಸರ್ಕಾರದ ಶಾಲೆಗಳು, ಅನುದಾನಿತ ಶಾಲೆಗಳು ಮತ್ತು ಸ್ಥಳೀಯ ಸಂಸ್ಥೆಗಳ ಅಧೀನದಲ್ಲಿರುವ ಶಾಲೆಗಳಲ್ಲಿನ ಖಾಯಂಗೊಂಡ ಶಿಕ್ಷಕರು ಮತ್ತು ಮುಖ್ಯ ಶಿಕ್ಷಕರು.
2. ಕೇಂದ್ರ ಸರ್ಕಾರದ ಮತ್ತು ಸಿ.ಬಿ.ಎಸ್.ಇ ಮತ್ತು ಸಿ.ಐ.ಎಸ್.ಸಿ.ಇ ಮಾನ್ಯತೆ ಪಡೆದ ಶಾಲೆಗಳ ಖಾಯಂಗೊಂಡ ಶಿಕ್ಷಕರು ಮತ್ತು ಮುಖ್ಯ ಶಿಕ್ಷಕರು.

ಸ್ವಯಂ ತಾವೇ ಆನ್ ಲೈನ್ ಮೂಲಕ http://nationalawardstoteachers.mhrd. gov.in /nat/Welcome.aspx ಅಂತರ್ಜಾಲ ತಾಣದ ಮೂಲಕ) **ಅರ್ಜಿ ಸಲ್ಲಿಸಲು ದಿನಾಂಕ: 16-06-2020 ರಿಂದ 06-07-2020 ರವರೆಗೆ ನಿಗದಿಪಡಿಸಲಾಗಿದ್ದ ಅವಧಿಯನ್ನು ಉಲ್ಲೇಖಿತ ಪತ್ರದ ಅನುಸಾರ ದಿನಾಂಕ: 11-07-2020 ರವರೆಗೆ ವಿಸ್ತರಿಸಲಾಗಿದೆ.**

ಈ ಕುರಿತು ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಉಪನಿರ್ದೇಶಕರು (ಆಡಳಿತ ) ರವರುಗಳು ತಮ್ಮ-ತಮ್ಮ ವ್ಯಾಪ್ತಿಯಲ್ಲಿ ವ್ಯಾಪಕ ಪ್ರಚಾರದ ಮೂಲಕ ಮಾಹಿತಿಯನ್ನು ನೀಡುವುದರ ಮೂಲಕ ಮತ್ತು ಕಛೇರಿ ಸೂಚನಾ ಫಲಕಯಲ್ಲಿ ಅಳವಡಿಸುವುದರ ಮೂಲಕ ಹೆಚ್ಚು ಶಿಕ್ಷಕರ / ಮುಖ್ಯ ಶಿಕ್ಷಕರ ಗಮನಕ್ಕೆ ತಂದು ಹೆಚ್ಚಿನ ಸಂಖ್ಯೆಯಲ್ಲಿ ಅರ್ಜಿ ಸಲ್ಲಿಸಲು ಪ್ರೋತ್ಸಾಹಿಸುವುದು. ಉಳಿದ ಅಂಶಗಳು ಯಥಾವತ್ತಾಗಿ ಮುಂದುವರೆಯುತ್ತದೆ.

ನಿರ್ದೇಶಕರು(ಪ್ರಾಥಮಿಕ ಶಿಕ್ಷಣ)

ಪ್ರತಿಯನ್ನು ಮುಂದಿನ ಕ್ರಮಕ್ಕಾಗಿ,

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) & (ಅಭಿವೃದ್ಧಿ) , ಸಾ.ಶಿ.ಇಲಾಖೆ ಇವರುಗಳಿಗೆ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾ.ಶಿ.ಇಲಾಖೆ ಇವರುಗಳಿಗೆ.

3. ಇಲಾಖಾ ಅಂತರ್ಜಾಲ ತಾಣದಲ್ಲಿ ಮೇಲ್ಕಂಡಂತೆ ಕೊಂಡಿಯನ್ನು(ಲಿಂಕ್) ಜೋಡಿಸಲು ಮತ್ತು ಮುಖ ಪುಟದಲ್ಲಿ ದಿನಾಂಕ:11.07.2020 ರವರೆಗೆ ಕಾಣುವಂತೆ ಅಳವಡಿಸಲು ಈ ಕಛೇರಿಯ ಇ-ಆಡಳಿತ ಘಟಕಕ್ಕೆ.
4. ಹಿರಿಯ ಸಹಾಯಕ ನಿರ್ದೇಶಕರು(ಸಾರ್ವಜನಿಕ ಸಂಪರ್ಕ ಮತ್ತು ಶಿಕ್ಷಣ ವಾರ್ತೆ) ಇವರಿಗೆ ಶಿಕ್ಷಣ ವಾರ್ತೆಯಲ್ಲಿ
ಪ್ರಕಟಿಸಲು.

ಪ್ರತಿಯನ್ನು ಮಾಹಿತಿಗಾಗಿ,

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ) ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಗೌರವಪೂರ್ವಕವಾಗಿ ಸಲ್ಲಿಸಿದೆ.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು ಇವರ ಆಪ್ತ ಕಾರ್ಯದರ್ಶಿಯರವರಿಗೆ ಸಲ್ಲಿಸುತ್ತಾ ಆಯುಕ್ತರ ಆದ್ಯ ಗಮನಕ್ಕೆ ತರಲು ಕೋರಿದೆ.
3. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಮಾಹಿತಿಗಾಗಿ ವಂದನಾಪೂರ್ವಕವಾಗಿ ಸಲ್ಲಿಸಿದೆ.
4. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ/ಕಲಬುರಗಿ. ಇವರುಗಳಿಗೆ.
5. ನಿರ್ದೇಶಕರು, (ಪ್ರೌಢಶಿಕ್ಷಣ), ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
6. ನಿರ್ದೇಶಕರು (ಡಿ.ಎಸ್.ಇ.ಆರ್.ಟಿ), ಬನಸಂಕರಿ ರಿಂಗ್ ರಸ್ತೆ, ಬೆಂಗಳೂರು.
7. ಸಹ ನಿರ್ದೇಶಕರು, ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ, ಶಿಕ್ಷಕರ ಸದನ, ಕೆ.ಜಿ ರಸೆ, ಬೆಂಗಳೂರು.
8. ಅಧ್ಯಕ್ಷರು, ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ, ಬೆಂಗಳೂರು.
9. ಅಧ್ಯಕ್ಷರು, ಕರ್ನಾಟಕ ರಾಜ್ಯ ಪ್ರೌಢ ಶಾಲಾ ಸಹ ಶಿಕ್ಷಕರ ಸಂಘ, ಬೆಂಗಳೂರು.
10. ಅಧ್ಯಕ್ಷರು, ಕರ್ನಾಟಕ ರಾಜ್ಯ ಪ್ರೌಢ ಶಾಲಾ ಮುಖ್ಯ ಶಿಕ್ಷಕರ ಸಂಘ, ಬೆಂಗಳೂರು.
11. ಕಛೇರಿ ಪ್ರತಿ.